**Akashvani : Bangalore**
**Regional Bulletin In Kannada**
**13.02.2026 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**13.02.2026 / 18.40 hrs**

**<><*<><>*><>**

ಮುಖ್ಯಾಂಶಗಳು

**೧. ಹಾವೇರಿಯಲ್ಲಿ ನಾಳೆ ರಾಜ್ಯ ಸರ್ಕಾರದಿಂದ ಸಾಧನಾ ಹಾಗೂ ಭೂ ಗ್ಯಾರಂಟಿ ಸಮಾವೇಶ**

**೨. ರಾಜ್ಯದಲ್ಲಿ ಕಳೆದ ಎರಡೂವರೆ ವರ್ಷಗಳಲ್ಲಿ ಯಾವುದೇ ಹೊಸ ಅಭಿವೃದ್ಧಿ ಕಾರ್ಯಕ್ರಮ ನಡೆದಿಲ್ಲ - ಬಿಜೆಪಿ ಟೀಕೆ**

**೩. ಮೇಕೆದಾಟು-ಕೃಷ್ಣಾ ಮೇಲ್ದಂಡೆ ಬಾಕಿ ಯೋಜನೆ ಜಾರಿಗೆ - ಕೇಂದ್ರ ಸರ್ಕಾರದಿಂದ ಅನುಮತಿ ನಿರೀಕ್ಷೆ ; ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಶ್ವಾಸ**

**೪. ಕರ್ನಾಟಕಕ್ಕೆ ರಾಷ್ಟ್ರೀಯ ಟಿ-೨೦ ದೃಷ್ಟಿ ವಿಶೇಷ ಚೇತನರ ಕ್ರಿಕೆಟ್ ಕಿರೀಟ**

**<><*<><>*><>**

ರಾಜ್ಯ ಸರ್ಕಾರದ ವತಿಯಿಂದ ನಾಳೆ ಹಾವೇರಿಯಲ್ಲಿ ಸಾಧನಾ ಸಮಾವೇಶ ಹಾಗೂ ಭೂ ಗ್ಯಾರಂಟಿ ಸಮರ್ಪಣಾ ಸಮಾವೇಶ ಆಯೋಜಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಲಿದೆ. ಸಮಾವೇಶದಲ್ಲಿ ಲಕ್ಷಕ್ಕೂ ಹೆಚ್ಚು ಮಂದಿಗೆ ಹಕ್ಕುಪತ್ರಗಳನ್ನು ವಿತರಿಸಲಾಗುತ್ತಿದ್ದು, ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರು, ಶಾಸಕರು ಹಾಗೂ ಗಣ್ಯರು ಕುಳಿತುಕೊಳ್ಳಲು ವೇದಿಕೆ ಸಿದ್ಧಪಡಿಸಲಾಗಿದ್ದು, ಜನರ ಪ್ರಯಾಣಕ್ಕೆ ಜಿಲ್ಲೆಯಲ್ಲಿ ೧೭೫ ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ. ಸಮಾವೇಶಕ್ಕೆ ಬರುವ ಜನರ ಭದ್ರತೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಯಶೋಧಾ ವಂಟಗೋಡಿ ತಿಳಿಸಿದ್ದಾರೆ. ಸಮಾವೇಶದ ಪ್ರತಿಯೊಂದು ದೃಶ್ಯಗಳನ್ನು ಸೆರೆ ಹಿಡಿಯಲು ೬೦ ಸಿ.ಸಿ.ಟಿ.ವಿ ಕ್ಯಾಮೆರಾಗಳ ವ್ಯವಸ್ಥೆ ಮಾಡಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

**<><*<><>*><>**

ಹಾವೇರಿಯಲ್ಲಿ ನಾಳೆ ನಡೆಯಲಿರುವ ಸಾಧನಾ ಸಮಾವೇಶದಲ್ಲಿ ೧ ಲಕ್ಷದ ೬ ಸಾವಿರ ಹಕ್ಕುಪತ್ರಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಅವರು, ಗದಗನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸಾವಿರ ದಿನಗಳ ಸಾರ್ಥಕ ಸೇವೆಯನ್ನು ಜನರಿಗೆ ಸಮರ್ಪಿಸುವುದೇ ರಾಜ್ಯ ಸರ್ಕಾರದ ಉದ್ದೇಶವಾಗಿದೆ ಎಂದರು. ರಾಜ್ಯ ಸರ್ಕಾರ ೬ ಸಾವಿರದ ೫೦೦ ಕಂದಾಯ ಗ್ರಾಮಗಳ ಘೋಷಣೆ ಗುರಿ ಹೊಂದಿದ್ದು, ೨ ಲಕ್ಷದ ೨೦

ಸಾವಿರ ಕುಟುಂಬಗಳಿಗೆ ಹಕ್ಕು ಪತ್ರ ನೀಡುವ ಕೆಲಸವನ್ನು ಸರ್ಕಾರ ಮಾಡುತ್ತಿದೆ ಎಂದು ಅವರು ಈ ಸಂದರ್ಭದಲ್ಲಿ ತಿಳಿಸಿದರು.

**<><*<><>*><>**

ರಾಜ್ಯದಲ್ಲಿ ಕಳೆದ ಎರಡೂವರೆ ವರ್ಷಗಳಲ್ಲಿ ಯಾವುದೇ ಹೊಸ ಅಭಿವೃದ್ಧಿ ಕಾರ್ಯಕ್ರಮಗಳ ನಡೆದಿಲ್ಲ ಎಂದು ರಾಜ್ಯ ಬಿಜೆಪಿ ಟೀಕಿಸಿದೆ. ಕಳೆದ ಸಾವಿರ ದಿನಗಳು ಕಾಂಗ್ರೆಸ್ ಸರ್ಕಾರದ ಜನ ವಿರೋಧಿ ಕರಾಳ ದಿನಗಳಾಗಿವೆ. ಅಂದಮೇಲೆ ಯಾವ ಸಾಧನೆಗಾಗಿ ಸಮಾವೇಶ ನಡೆಸಲಾಗುತ್ತಿದೆ ಎಂದು ವಿಧಾನಸಭೆಯಲ್ಲಿನ ಪ್ರತಿಪಕ್ಷ ನಾಯಕ ಆರ್.ಅಶೋಕ ಪ್ರಶ್ನಿಸಿದ್ದಾರೆ.  ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರದಿಂದ ರೇಷನ್ ಕಾರ್ಡ್ ರದ್ದು ಮಾಡಲಾಗಿದೆ. ಬಗರ್‌ಹುಕುಂ ಜಮೀನನ್ನು ಯಾರಿಗೂ ಕೊಡುತ್ತಿಲ್ಲ, ಅಬಕಾರಿ ಇಲಾಖೆಯಲ್ಲಿ ೬ ಸಾವಿರ ಕೋಟಿ ರೂಪಾಯಿ ಹಗರಣ ನಡೆದಿದೆ ಎಂದು ಅವರು ಆರೋಪಿಸಿದರು. ರೈತರು ಹಾಗೂ ಅಧಿಕಾರಿಗಳ ಆತ್ಮಹತ್ಯೆ, ಸರ್ಕಾರಿ ಆಸ್ಪತ್ರೆಗಳಲ್ಲಿ ಜೀವರಕ್ಷಕ ಔಷಧಿಗಳ ಕೊರತೆ, ಮೊದಲಾದ ಸಮಸ್ಯೆಗಳು ರಾಜ್ಯದಲ್ಲಿದೆ. ರಾಜ್ಯ ಸರ್ಕಾರ ಜನರ ಹಿತಾಸಕ್ತಿ ಬಗ್ಗೆ ಗಮನ ನೀಡುತ್ತಿಲ್ಲ ಎಂದು ಆಪಾದಿಸಿದರು.

**<><*<><>*><>**

ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರವು ನಾಳೆ ಸಾವಿರ ದಿನಗಳ ಸಂಭ್ರಮಾಚರಣೆಗೆ ಸಿದ್ಧವಾಗಿದೆ. ರಾಜ್ಯದಲ್ಲಿ ಅಭಿವೃದ್ಧಿ ಶೂನ್ಯವಾಗಿದೆ. ಪರಿಶಿಷ್ಟ ಜಾತಿ, ವರ್ಗಗಳಿಗೆ ೪೧ ಸಾವಿರ ಕೋಟಿ ರೂಪಾಯಿ ಹಣ ಇಟ್ಟಿರುವುದಾಗಿ ಸರ್ಕಾರ ಹೇಳಿತ್ತು. ಇದುವರೆಗೂ ಹಣ ಕೊಟ್ಟಿಲ್ಲ ಎಂದು ದೂರಿದರು.

**<><*<><>*><>**

ಕಳೆದ ಎರಡೂವರೆ ವರ್ಷದಲ್ಲಿ ರಾಜ್ಯ ಸರ್ಕಾರ ಒಂದೂ ಹೊಸ ಅಭಿವೃದ್ಧಿ ಯೋಜನೆ ನೀಡಿಲ್ಲ ಎಂದು ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಆಕ್ಷೇಪಿಸಿದ್ದಾರೆ. ಇಂದು ವಿಕಸಿತ ಭಾರತ ಜಿ-ರಾಮ್-ಜಿ ಕುರಿತ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗೃಹಲಕ್ಷ್ಮಿ ಯೋಜನೆಗೆ ಹಣ ಕ್ರೋಢೀಕರಿಸಲು ಸಾಧ್ಯವಾಗದೇ, ರಾಜ್ಯ ಸರ್ಕಾರಿ ಅಬಕಾರಿ ಇಲಾಖೆಗೆ ೪೦ ಸಾವಿರ ಕೋಟಿ ವ್ಯವಹಾರದ ಗುರಿ ನೀಡಿದೆ ಎಂದು ದೂರಿದರು. ವಿಕಸಿತ ಭಾರತ ಜಿ ರಾಮ್ ಜಿ ಹೊಸ ಕಾಯ್ದೆಯನ್ನು ಕೇಂದ್ರ ಸರಕಾರ ಅನುಷ್ಠಾನಕ್ಕೆ ತಂದಿದೆ. ಹಿಂದೆ ಕೂಲಿಗಾಗಿ ಕಾಳು ಎಂದಿತ್ತು. ನಂತರ ಉದ್ಯೋಗ ಖಾತರಿ, ಮನ್ರೇಗಾ ಆಗಿತ್ತು. ಇದೀಗ ಕೇಂದ್ರ ಸರ್ಕಾರ, ಅದಕ್ಕೆ ಒಂದು ಹೊಸ ರೂಪ ಕೊಟ್ಟು, ಸಾಕಷ್ಟು ಸುಧಾರಣೆಗಳನ್ನು ತಂದು ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಿ ಅದನ್ನು ಅನುಷ್ಠಾನಕ್ಕೆ ತಂದಿದೆ ಎಂದು ಹೇಳಿದರು.  ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿ ಸಿಗುತ್ತಿಲ್ಲ. ಜಿಲ್ಲಾ, ತಾಲ್ಲೂಕು ಆಸ್ಪತ್ರೆಗಳಲ್ಲಿ ಬಡವರು ಪರದಾಡುತ್ತಿದ್ದಾರೆ. ಪ್ರಧಾನಮಂತ್ರಿಯವರು ಜನೌಷಧಿ ಕೇಂದ್ರ ತೆರೆದರೆ ಅದಕ್ಕೂ ರಾಜ್ಯ ಸರ್ಕಾರ ತಡೆ ಹಾಕಿದೆ ಎಂದು ಬಿ.ವೈ. ವಿಜಯೇಂದ್ರ ದೂರಿದರು.

**<><*<><>*><>**

ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣದ ಹಕ್ಕು ಕಾಯ್ದೆ-೨೦೦೯ ಕುರಿತು ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಸಮಗ್ರ ಜ್ಞಾನ ಹೊಂದಿ, ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿಗೆ ತರಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ವೆಂಕಟೇಶ್ ಸೂಚಿಸಿದ್ದಾರೆ. ಯಾದಗಿರಿ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಆಯೋಜಿಸಿದ್ದ ಉಚಿತ ಮತ್ತು ಕಡ್ಡಾಯ ಶಿಕ್ಷಣ ಕುರಿತ ಅರಿವು ಕಾರ್ಯಕ್ರಮ ಹಾಗೂ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆರ್‌ಟಿಇ ಕಾಯ್ದೆ ಕೇವಲ ಶಾಲಾ ಪ್ರವೇಶಕ್ಕೆ ಸೀಮಿತವಾಗಬಾರದು ಎಂದರು. ವಿದ್ಯಾರ್ಥಿಗಳಿಗೆ ಸಿಗಬೇಕಾದ ಸವಲತ್ತುಗಳು ಸಮಯಕ್ಕೆ ಸರಿಯಾಗಿ ದೊರೆಯುವಂತೆ ಕ್ರಮ ಕೈಗೊಳ್ಳಬೇಕು. ಮಕ್ಕಳ ಹಕ್ಕುಗಳ ರಕ್ಷಣೆಯಲ್ಲಿ ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ಮಾಡಬೇಕು ಎಂದು ಹೇಳಿದರು. ಮಕ್ಕಳ ಮೇಲೆ ನಡೆಯುವ ದೌರ್ಜನ್ಯ, ಹಿಂಸೆ ಮತ್ತು ದಬ್ಬಾಳಿಕೆಗಳ ವಿರುದ್ಧ ಧೈರ್ಯವಾಗಿ ಧ್ವನಿ ಎತ್ತಬೇಕು. ಯಾವುದೇ ದೂರುಗಳ ಮೇಲೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಕ್ರಮ ಕೈಗೊಳ್ಳಲು ಸಿದ್ಧವಿದ್ದು, ಎಲ್ಲ ಇಲಾಖೆಗಳು ಸಮನ್ವಯದಿಂದ ಸಂವಿಧಾನಬದ್ಧವಾಗಿ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದ್ದಾರೆ.

**<><*<><>*><>**

ಮೇಕೆದಾಟು ಹಾಗೂ ಕೃಷ್ಣಾ ಮೇಲ್ದಂಡೆ ಬಾಕಿ ಯೋಜನೆಗಳ ಜಾರಿಗೆ ಕೇಂದ್ರ ಸರ್ಕಾರ ಅಗತ್ಯ ಅನುಮತಿ ಹಾಗೂ ಸಹಕಾರ ನೀಡುವ ಭರವಸೆ ಇದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಅವರು ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯ ಜೆಜೆ ಟಾಟಾ ಸಭಾಂಗಣದಲ್ಲಿಂದು ಆರಂಭವಾದ ಅಂತಾರಾಷ್ಟ್ರೀಯ ಅಣೆಕಟ್ಟು ಸುರಕ್ಷತಾ ಸಮ್ಮೇಳನದಲ್ಲಿ ಪಾಲ್ಗೊಂಡು ಮಾತನಾಡಿದರು. ಬೆಂಗಳೂರಿಗೆ ನೀರು ಪೂರೈಸುವ ಜವಾಬ್ದಾರಿ ಸರ್ಕಾರದ ಮೇಲಿದೆ. ಹೀಗಾಗಿ ರಾಜ್ಯ ಸರ್ಕಾರ ಸಮತೋಲಿದ ಅಣೆಕಟ್ಟು ನಿರ್ಮಾಣಕ್ಕೆ ಮುಂದಾಗಿದ್ದು, ಇತ್ತೀಚೆಗೆ ಸುಪ್ರೀಂ ಕೋರ್ಟ್ ಈ ಯೋಜನೆ ಪರವಾಗಿ ತೀರ್ಪು ನೀಡಿದೆ ; ಆ ಮೂಲಕ ರಾಜ್ಯ ಸರ್ಕಾರ ಈ ಯೋಜನೆ ಜಾರಿ ಮಾಡಲಿದ್ದು, ಕೇಂದ್ರ ಸರ್ಕಾರದ ಅನುಮತಿಗೆ ಕಾಯಲಾಗುತ್ತಿದೆ ; ಈ ಯೋಜನೆಯಿಂದ ಬೆಂಗಳೂರು ಸೇರಿದಂತೆ ಈ ಭಾಗದ ಪ್ರದೇಶಗಳಿಗೆ ಕುಡಿಯುವ ನೀರು ಹಾಗೂ ೪೦೦ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಗೆ ಸಹಕಾರಿಯಾಗಲಿದೆ ಎಂದು ಅವರು ವಿವರಿಸಿದರು.ಕೃಷ್ಣಾ ಮೇಲ್ದಂಡೆ ಯೋಜನೆಯಲ್ಲಿ ಭೂಮಿ ಕಳೆದುಕೊಳ್ಳುವ ರೈತರಿಗೆ ೨೦೧೩ರ ಕಾಯ್ದೆ ಅನುಸಾರ ಉತ್ತಮ ಪರಿಹಾರ ನೀಡಲು ತೀರ್ಮಾನಿಸಲಾಗಿದೆ. ೨೦೨೫ರ ಡಿಸೆಂಬರ್ ವೇಳೆಗೆ ೧ ಲಕ್ಷ ೭೨ ಸಾವಿರ ಎಕರೆಯಷ್ಟು ಕೃಷಿ ಭೂಮಿಗೆ ನೀರಾವರಿ ಸೌಲಭ್ಯವನ್ನು ಕಲ್ಪಿಸಲಾಗಿದೆ. ಅಣೆಕಟ್ಟು ಸುರಕ್ಷತಾ ಮಾರ್ಗಸೂಚಿಯಲ್ಲಿ ಅಣೆಕಟ್ಟಿನ ಸುತ್ತ ೫೦೦ ಮೀಟರ್ ವರೆಗೂ ವಿಧಿಸಲಾಗಿರುವ ನಿಬಂಧನೆಯನ್ನು ಸಡಿಲಗೊಳಿಸಬೇಕು. ಆ ಮೂಲಕ ಅಣೆಕಟ್ಟುಗಳ ಬಳಿ ಪ್ರವಾಸೋದ್ಯಮಕ್ಕೆ ಅವಕಾಶ ಕಲ್ಪಿಸಿ ಸ್ಥಳೀಯ ಆರ್ಥಿಕತೆಗೆ ನೆರವಾಗಬೇಕು ಎಂದು ರಾಜ್ಯ ಸರ್ಕಾರದ ಪರವಾಗಿ ಮನವಿ ಮಾಡುವುದಾಗಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.

**<><*<><>*><>**

ಆದಷ್ಟು ಬೇಗ ಪಡಿತರ ಚೀಟಿ ಪರಿಷ್ಕರಣೆ ಪೂರ್ಣಗೊಳಿಸಿ ಹೊಸ ಅರ್ಹ ಫಲಾನುಭವಿಗಳಿಗೆ ಪಡಿತರ ಕಾರ್ಡ್ ವಿತರಣೆ ಮಾಡುವ ನಿಟ್ಟಿನಲ್ಲಿ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದ್ದಾರೆ. ಹಾಸನದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಹೊಸದಾಗಿ ೨೧೦ ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲು ಸರ್ಕಾರ ತೀರ್ಮಾನಿಸಿದ್ದು, ಜನರಿಗೆ ಸಮೀಪದಲ್ಲೇ ಆಹಾರ ಧಾನ್ಯ ಲಭ್ಯವಾಗುವಂತೆ ಕ್ರಮ ಕೈಗೊಳ್ಳಲಾಗಿದೆ ಎಂದರು. 'ಇಂದಿರಾ ಕಿಟ್' ನೀಡುವುದರಿಂದ ಪೌಷ್ಟಿಕ ಆಹಾರ ಒದಗಿಸಿದಂತಾಗುತ್ತದೆ. ಈ ತಿಂಗಳು ಅಥವಾ ಮುಂದಿನ ತಿಂಗಳಲ್ಲಿ ವಿತರಣೆ ಪ್ರಾರಂಭವಾಗಲಿದೆ. ರಾಜ್ಯ ಮಟ್ಟದಲ್ಲಿ ಒಟ್ಟು ಒಂದು ಕೋಟಿ ೨೫ ಲಕ್ಷ ಫುಡ್ ಕಿಟ್‌ಗಳನ್ನು ವಿತರಿಸಲು ಸರ್ಕಾರ ಯೋಜನೆ ರೂಪಿಸಿದೆ ಎಂದು ಸಚಿವ ಮುನಿಯಪ್ಪ ಮಾಹಿತಿ ನೀಡಿದರು.

**<><*<><>*><>**

ರಾಜ್ಯದ ಪುರುಷರ ತಂಡ ರಾಷ್ಟ್ರೀಯ ಟಿ-೨೦ ದೃಷ್ಟಿ ವಿಶೇಷ ಚೇತನರ ಕ್ರಿಕೆಟ್ ಚಾಂಪಿಯನ್‌ಶಿಪ್ ಗೆದ್ದುಕೊಂಡಿದೆ. ಗುರುಗ್ರಾಮದಲ್ಲಿ ಇಂದು ನಡೆದ ಅಂತಿಮ ಪಂದ್ಯ ಸೂಪರ್ ಓವರ್‌ಗೆ ಸಾಕ್ಷಿಯಾಯಿತು. ಮೊದಲು ಬ್ಯಾಟ್ ಮಾಡಿದ ದೆಹಲಿ ತಂಡ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೨೧೭ ರನ್ ಗಳಿಸಿತು. ನಾಯಕ ಮನೀಶ್ ಕುಮಾರ್ ೪೭ ಎಸೆತಗಳಲ್ಲಿ ೭೯ ರನ್ ಮಾಡಿದರು. ಇದಕ್ಕೆ ಉತ್ತರವಾಗಿ ಕರ್ನಾಟಕ ತಂಡ ಅತ್ಯುತ್ತಮ ಆಟ ಪ್ರದರ್ಶಿಸಿ ೨೧೭ ರನ್‌ಗಳಿಸಿತ್ತು. ಸುನೀಲ್ ರಮೇಶ್ ೭೯ ಎಸೆತಗಳಲ್ಲಿ ೧೪೫ ರನ್ ಗಳಿಸಿದರು. ಪಂದ್ಯ ಸಮಸ್ಥಿತಿ ತಲುಪಿದಾಗ ಸೂಪರ್ ಓವರ್‌ನಲ್ಲಿ ದೆಹಲಿ ೧೦ ರನ್ ಗಳಿಸಿದರೇ, ಕರ್ನಾಟಕ ೧೧ ರನ್ ಗಳಿಸುವ ಮೂಲಕ ಒಂದು ರನ್ ಅಂತರದ ರೋಚಕ ಗೆಲುವು ದಾಖಲಿಸಿತು.ಸುನೀಲ್ ರಮೇಶ್ ಪಂದ್ಯ ಪ್ರಶಸ್ತಿಗೆ ಭಾಜನರಾದರು. ಈ ಪಂದ್ಯವನ್ನು ಗೆಲ್ಲುವ ಮೂಲಕ ಕರ್ನಾಟಕ ವಿಶೇಷ ಚೇತನರ ತಂಡ ಇಂಡಸ್ ಇಂಡ್ ಬ್ಯಾಂಕ್ ನಾಗೇಶ್ ಟ್ರೋಫಿಯನ್ನು ತನ್ನದಾಗಿಸಿಕೊಂಡಿತು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**